## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ: ಎಂ. ಕೃಷ್ಣರಾಜು ಹಾಗೂ ಡಾ: ಎಸ್. ಪ್ರೇಮಕುಮಾರ್. ಇವರುಗಳ ಸೇವೆಯನ್ನು ಮಾತೃ ಇಲಾಖೆಗೆ ಹಿಂದಿರುಗಿಸುವ ಬಗ್ಗೆ.

ಓದಲಾಗಿದೆ: 1) ಕರ್ನಾಟಕ ಆಡಳಿತ ನ್ಯಾಯಮಂಡಳಿ ಅರ್ಜಿ ಸಂಖ್ಯೆ:449/09 ಮತ್ತು ಇತರೆ ಅರ್ಜಿಗಳಲ್ಲಿ ದಿನಾಂಕ:30.08.2011ರ ಆದೇಶ.

2) ಅಧಿಸೂಚನೆ ಸಂಖ್ಯೆ: ಪಸಂಮೀ 312 ಪಅಸೇ 2011. ದಿ:20.03.2012.

****

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಕೆಲವು ಸಹಾಯಕ ನಿರ್ದೇಶಕರುಗಳು ಅವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ವಿಲೀನಗೊಳಿಸಲು ಸೂಚಿಸುವಂತೆ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಸಲ್ಲಿಸಿದ್ದ ಅರ್ಜಿ ಸಂಖ್ಯೆ:449/2011ನ್ನು ಪರಿಶೀಲಿಸಿ, ನ್ಯಾಯಮಂಡಳಿ ಮೇಲೆ ಕ್ರಮಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:30.08.2011ರ ಆದೇಶದಲ್ಲಿ ಈ ಕೆಳಕಂಡಂತೆ ಸೂಚಿಸಿದೆ.

> " The Respondents are hereby directed to consider the representations dated 25.6.2007 vide Annexure –A6 (seeking absorption in the RDPR department) and pass appropriate orders in accordance with law keeping in mind the correspondences between the two departments ( both lending and borrowing departments) and more particularly, the orders passed by this Tribunal in A.No.224 of 2008 and other connected orders which was disposed of on 1/10/2008. Interim Orders wherever granted by this Tribunal and continued from time to time shall be in force till the disposal of the representations for absorption given by the Applicants"

ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ನಿರ್ದೇಶನದಂತೆ 12 ಅಧಿಕಾರಿಗಳ ಸೇವೆಯನ್ನು ಸಕ್ರಮಗೊಳಿಸುವ ಬಗ್ಗೆ ಉಭಯ ಇಲಾಖೆಗಳು ಪರಸ್ಪರ ಸಮಾಲೋಚನೆ ನಡೆಸಿದವು ಈ 12 ಅಧಿಕಾರಿಗಳ ಪೈಕಿ, ಡಾ: ಎಂ. ಕೃಷ್ಣರಾಜು ಹಾಗೂ ಡಾ:ಎಸ್. ಪ್ರೇಮಕುಮಾರ್, ಇವರುಗಳನ್ನು ಹೊರತುಪಡಿಸಿ ಉಳಿದ 10 ಅಧಿಕಾರಿಗಳ ಸೇವೆಯನ್ನು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 355 ಪಜವ2011, ದಿನಾಂಕ: 24-3-2012ರಲ್ಲಿ ವಿಲೀನಗೊಳಿಸಲಾಗಿದೆ.

ಡಾ: ಎಂ. ಕೃಷ್ಣರಾಜು ಹಾಗೂ ಡಾ:ಎಸ್. ಪ್ರೇಮಕುಮಾರ್, ಇವರುಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಿಯೋಜನೆ ಮೇಲೆ ತಾಲ್ಲೂಕು ಪಂಚಾಯತ್, ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಕರ್ತವ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಗಂಭೀರ ಆರೋಪಗಳಿಗೆ ಸಂಬಂಧಿಸಿದಂತೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಯುತ್ತಿರುವುದರಿಂದ ಇವರ ಸೇವೆಯನ್ನು ವಿಲೀನಗೊಳಿಸುವುದು ಹಾಗೂ ನಿಯೋಜನೆಯನ್ನು ಮುಂದುವರೆಸುವುದು ಇಲಾಖಾ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಸಮಂಜಸವಲ್ಲವೆಂದು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 356 ಪಬವ 2011, ಬೆಂಗಳೂರು ದಿನಾಂಕ: 02-11-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಿಯೋಜನೆ ಆಧಾರದ ಮೇಲೆ ಕರ್ತವ್ಯನಿರ್ವಹಿಸುತ್ತಿರುವ ಡಾ: ಎಂ. ಕೃಷ್ಣರಾಜು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಂಜನಗೂಡು ಮತ್ತು ಡಾ: ಎಸ್. ಪ್ರೇಮಕುಮಾರ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೈಸೂರು, ಇವರುಗಳ ಸೇವೆಯನ್ನು ಈ ಇಲಾಖೆಯಲ್ಲಿ ವಿಲೀನಗೊಳಿಸುವ ಪ್ರಸ್ತಾವನೆಯನ್ನು ಕೈಬಿಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ರಘುನಾಥ್
(ಹೆಚ್.ಬಿ. ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

D 2/11/12

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು.
4. ಸಂಬಂಧಿಸಿದ ಅಧಿಕಾರಿಗಳಿಗೆ.
5. ಮಾನ್ಯ ಉಪ ಮುಖ್ಯಮಂತ್ರಿಯವರ ವಿಶೇಷ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಸೇವೆಗಳು).
7. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ (ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆ.
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.